ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

21 ಕೋರ್ಟ್ ಮಾಹಿತಿ

ಇಲಾಖೆ / ವಿಷಯ : DEPARTMENT / SUBJECT: Court Matter

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE: 15/4/19

## ರಫೇಲ್: ವಿಚಾರಣೆಗೆ 'ಸುಪ್ರೀಂ' ಸಮ್ಮತಿ

ನವದೆಹಲಿ: ರಫೇಲ್ ಯುದ್ಧ ವಿಮಾನಗಳ ಖರೀದಿಗೆ ಸಂಬಂಧಿಸಿ ಫ್ರಾನ್ಸ್ ಮಾಧ್ಯಮಗಳು ಪ್ರಕಟಿಸಿರುವ 'ಹೊಸ ವಿಷಯಗಳ' ಹಿನ್ನೆಲೆಯಲ್ಲಿ ವಹಿವಾಟು ಕುರಿತು ಹೊಸದಾಗಿ ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ಸಮ್ಮತಿಸಿದೆ.

ಯುದ್ಧ ವಿಮಾನಗಳ ಉತ್ಪಾದಕ ಸಂಸ್ಥೆಯಾದ ಡಾಸೊ ಏವಿಯೇಷನ್, ಭಾರತದ ಮಧ್ಯವರ್ತಿಗೆ ದಶಲಕ್ಷ ಯೂರೊ 'ಉಡುಗೊರೆ' ನೀಡಿದೆ ಎಂದು ಸಂಸ್ಥೆ ಹೇಳಿಕೆ ಆಧರಿಸಿ ಮಾಧ್ಯಮಗಳು ವರದಿ ಮಾಡಿದ್ದವು.

ಇದನ್ನು ತುರ್ತಾಗಿ ವಿಚಾರಣೆಗೆ ಪರಿಗಣಿಸಬೇಕು ಎಂದು ಕೋರಿ ವಕೀಲ ಎಂ.ಎಲ್.ಶರ್ಮಾ ಅವರು ಸಲ್ಲಿಸಿದ್ದ ಮನವಿಯನ್ನು ಮುಖ್ಯ ನ್ಯಾಯಮೂರ್ತಿ ಎಸ್.ಎ. ಬೊಬಡೆ ನೇತೃತ್ವದ ನ್ಯಾಯಪೀಠವು ಪುರಸ್ಕರಿಸಿತು. ನ್ಯಾಯಮೂರ್ತಿಗಳಾದ ಎ.ಎಸ್. ಬೋಪಣ್ಣ ಮತ್ತು ವಿ.ರಾಮಸುಬ್ರಹ್ಮಣಿಯನ್ ಅವರೂ ಈ ಪೀಠದಲ್ಲಿದ್ದಾರೆ. ನಿಯಮಗಳ ಪ್ರಕಾರವೇ ಕೆಲ ವಾರಗಳ ನಂತರ ಈ ಪ್ರಕರಣವು ವಿಚಾರಣೆಗೆ ಬರಲಿದೆ.

ಪ್ರಧಾನಮಂತ್ರಿ ನರೇಂದ್ರ ಮೋದಿ, ಡಾಸೊ ರಿಲಯನ್ಸ್ ಏರೋಸ್ಪೇಸ್ ಸಂಸ್ಥೆ ಹಾಗೂ ಡಿಎಫ್‌ಸಿಎಸ್ ಸೊಲ್ಯೂಷನ್ಸ್ ಸಂಸ್ಥೆಯ ಸುಶೇನ್ ಮೋಹನ್ ಗುಪ್ತಾ ಅವರನ್ನು ಪ್ರತಿವಾದಿಗಳಾಗಿ ಅರ್ಜಿದಾರರು ಹೆಸರಿಸಿದ್ದಾರೆ.